# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 179(292) |
| ಮಾನ್ಯ ಸದಸ್ಯರ ಹೆಸರು | ಶ್ರೀ ಕುಶಾಲಪ್ಪ ಎಂ. ಪಿ (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 06/07/2023 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೊಡಗು ಜಿಲ್ಲೆಯಲ್ಲಿರುವ ನೋಂದಾಯಿತ ಅಸಂಘಟಿತ ವಲಯ ಕಾರ್ಮಿಕರ ಸಂಖ್ಯೆ ಎಷ್ಟು: (ವಿವರ ನೀಡುವುದು)</td><td>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ, ಅಂಬೇಡ್ಕರ್ ಕಾರ್ಮಿಕರ ಸಹಾಯ ಹಸ್ತ ಯೋಜನೆ, ಕೋವಿಡ್-19ರ ವಿಶೇಷ ಪ್ಯಾಕೇಜ್‌ಗಳಡಿ ಒಂದು ಬಾರಿ ನೆರವು ಕೋರಿ ಅರ್ಜಿ ಸಲ್ಲಿಸಿದ/ ನೋಂದಣಿಯಾದ ಹಾಗೂ ಇ-ಶ್ರಮ್ (ಅಸಂಘಟಿತ ಕಾರ್ಮಿಕರ ನೋಂದಣಿ) ಕಾರ್ಯಕ್ರಮದಡಿ ಕೊಡಗು ಜಿಲ್ಲೆಯಲ್ಲಿ ನೋಂದಣಿಯಾದ ಅಸಂಘಟಿತ ಕಾರ್ಮಿಕರ ವಿವರ ಈ ಕೆಳಗಿನಂತಿದೆ.
<table>
<tr><th>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ</th><th>ಅಂಬೇಡ್ಕರ್ ಕಾರ್ಮಿಕರ ಸಹಾಯ ಹಸ್ತ ಯೋಜನೆ,</th><th>ಕೋವಿಡ್-೧೯ರ ವಿಶೇಷ ಪ್ಯಾಕೇಜ್</th><th>ಇ-ಶ್ರಮ್ ಪೋರ್ಟಲ್</th></tr>
<tr><td>7326 (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ)</td><td>3812</td><td>6245</td><td>48583</td></tr>
</table>
</td></tr>
<tr><td>ಆ)</td><td>ರಾಜ್ಯದಲ್ಲಿ ಅಸಂಘಟಿತ ವಲಯ ಕಾರ್ಮಿಕರ ಅಭಿವೃದ್ಧಿಗೆ ಇರುವ ಯೋಜನೆಗಳೇನು:</td><td>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಈ ಕೆಳಕಂಡ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಗೊಳಿಸುತ್ತಿದೆ.<br><br>(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:- ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಸಂಬಂಧಪಟ್ಟಂತೆ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.</td></tr>
</table>

| | | |
|---|---|---|
| | | **ಅ) ಅಪಘಾತ ಪರಿಹಾರ ಸೌಲಭ್ಯ :** ಈ ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2ಲಕ್ಷದ ವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದ ವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br><br>**(ಆ) ಶೈಕ್ಷಣಿಕ ಧನ ಸಹಾಯ** : ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br><br>**2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br>ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಟೈಲರ್, ಕ್ಷೌರಿಕರು, ಹಾಗೂ ಭಟ್ಟಿ ಕಾರ್ಮಿಕ" ರನ್ನು ಆನ್‌ಲೈನ್ ಮೂಲಕ ಉಚಿತವಾಗಿ ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗುತ್ತಿದ್ದು, ಪ್ರಸ್ತುತ ಯಾವುದೇ ಆರ್ಥಿಕ ಸೌಲಭ್ಯಗಳನ್ನು ಒದಗಿಸುತ್ತಿಲ್ಲ.<br><br>**3)** ಇ-ಶ್ರಮ್ ಕಾರ್ಯಕ್ರಮ (ಅಸಂಘಟಿತ ಕಾರ್ಮಿಕರ ನೋಂದಣಿ) ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ಅಸಂಘಟಿತ ಕಾರ್ಮಿಕರ ದತ್ತಾಂಶವನ್ನು ಸಂಗ್ರಹಿಸುವ ಉದ್ದೇಶದಿಂದ, ಇ-ಶ್ರಮ್ ಪೋರ್ಟಲ್ ಅನ್ನು ಅಭಿವೃದ್ಧಿಪಡಿಸಿದ್ದು, ಯೋಜನೆಯಡಿ 16-59 ವಯೋಮಾನದ ಇ.ಎಸ್.ಐ ಹಾಗೂ ಇ.ಪಿ.ಎಫ್ ಸೌಲಭ್ಯವನ್ನು ಹೊಂದಿರದ ಹಾಗೂ ಆದಾಯ ತೆರಿಗೆ ಪಾವತಿ ಮಾಡದ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸುತ್ತಿದ್ದು, ಅವರು ಸಾಮಾನ್ಯ ಸೇವಾ ಕೇಂದ್ರ/ಬೆಂಗಳೂರು ಒನ್/ ಗ್ರಾಮ್ ಒನ್ ಮೂಲಕ ಅಥವಾ ಸ್ವಯಂ ಆಗಿ ಇ-ಶ್ರಮ್ ಪೋರ್ಟಲ್‌ನಲ್ಲಿ (eshram.gov.in) ಉಚಿತವಾಗಿ ನೋಂದಾಯಿಸಲಾಗುತ್ತಿದ್ದು. ಸ್ಥಳದಲ್ಲೇ ಗುರುತಿನ ಚೀಟಿಯನ್ನು ವಿತರಿಸಲಾಗುತ್ತಿದೆ.<br><br>ಸದರಿ ಕಾರ್ಮಿಕರು ಒಂದು ವರ್ಷಕ್ಕೆ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆ (PM-SYM) (ಅಪಘಾತ ವಿಮೆಯಾಗಿದ್ದು, ಅಪಘಾತದಿಂದ ಮರಣ ಹೊಂದಿದಲ್ಲಿ ಅಥವಾ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2 ಲಕ್ಷ ಹಾಗೂ ಭಾಗಶಃ ಅಂಗವೈಕಲ್ಯಕ್ಕೆ ರೂ.1 ಲಕ್ಷ ಪರಿಹಾರ) ಪ್ರಯೋಜನ ಪಡೆಯಬಹುದು. |

<table>
<tr>
<td>ಇ)</td>
<td>ಕೊಡಗು ಜಿಲ್ಲೆಯ ಅಸಂಘಟಿತ ವಲಯ ಕಾರ್ಮಿಕರ ಅಭಿವೃದ್ಧಿ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು: (ವಿವರ ನೀಡುವುದು)</td>
<td>ಮಂಡಳಿಯು ಜಾರಿಗೊಳಿಸುತ್ತಿರುವ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಯೋಜನೆಗಳಡಿ ಕೊಡಗು ಜಿಲ್ಲೆಯಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ವಿವರ ಈ ಕೆಳಗಿನಂತಿವೆ.
<table>
<tr><th colspan="4">ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ</th><th colspan="2">ಕೋವಿಡ್-19ರ ವಿಶೇಷ ಪ್ಯಾಕೇಜ್ (11 ಅಸಂಘಟಿತ ವರ್ಗಗಳ ಅರ್ಹ ಕಾರ್ಮಿಕರಿಗೆ)</th></tr>
<tr><th>ಪ್ರಕರಣಗಳ ಸಂಖ್ಯೆ</th><th>ಪರಿಹಾರದ ಮೊತ್ತ (ರೂ. ಲಕ್ಷಗಳಲ್ಲಿ)</th><th>ವಿದ್ಯಾರ್ಥಿಗಳ ಸಂಖ್ಯೆ</th><th>ಧನ ಸಹಾಯದ ಮೊತ್ತ (ರೂ. ಲಕ್ಷಗಳಲ್ಲಿ)</th><th>ಕಾರ್ಮಿಕರ ಸಂಖ್ಯೆ</th><th>ಪರಿಹಾರದ ಮೊತ್ತ (ರೂ. ಕೋಟಿಗಳಲ್ಲಿ)</th></tr>
<tr><td>7</td><td>35.00</td><td>13</td><td>1.30</td><td>6245</td><td>1.42</td></tr>
</table>
</td>
</tr>
<tr>
<td>ಈ)</td>
<td>ಕೊಡಗು ಜಿಲ್ಲೆಯಲ್ಲಿ ನೋಂದಣಿಯಾಗದ ಅಸಂಘಟಿತ ಕಾರ್ಮಿಕರನ್ನು ನೋಂದಣಿ ಮಾಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?</td>
<td>ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ನೋಂದಣಿಯಾಗದ ಅಸಂಘಟಿತ ಕಾರ್ಮಿಕರಿಗೆ ಯೋಜನೆಯ ಕುರಿತು ಅರಿವು ಮೂಡಿಸಲು ಕೊಡಗು ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಈ ಕೆಳಕಂಡ ಸಂವಹನ ಚಟುವಟಿಕೆಗಳನ್ನು ಕೈಗೊಳ್ಳಲಾಗಿರುತ್ತದೆ.<br><br>➢ ಕರಪತ್ರ, ದಿನ ಪತ್ರಿಕೆ, ಬ್ಯಾನರ್ಸ್, ಹಾಗೂ ಹೋರ್ಡಿಂಗ್‌ಗಳ ಮೂಲಕ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.<br>➢ ಉಚಿತ ಕಾರ್ಮಿಕ ಸಹಾಯವಾಣಿ 155214 ಮೂಲಕ ಯೋಜನೆಗಳ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ.<br>➢ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲಾಗಿದ್ದು, ಸದರಿ ಕೇಂದ್ರಗಳ ಮೂಲಕ ಕಾರ್ಮಿಕರಿಗೆ ಸೇವಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>ಯೋಜನೆಗಳ ಕುರಿತಂತೆ ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದೊಂದಿಗೆ ಸಹ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.</td>
</tr>
</table>

**ಕಾಇ 291 ಎಲ್‌ಇಟಿ 2023**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**